# Kadamba Scholarship Programme

ಪ್ರಜಾವಾಣಿ

## ನಗರ ವಾರ್ತೆ

ಬೀದರ್, ಆಗಸ್ಟ್ 7




ಬೀದರ್‌ನಲ್ಲಿ ಶುಕ್ರವಾರ ನಡೆದ ಕಾರ್ಯಾಗಾರದಲ್ಲಿ ಐ.ಎಫ್.ಎಸ್. ಅಧಿಕಾರಿ ಮಹಾಲಿಂಗ ಮದರಗಾಂವ್ ಅವರು ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ವಿದ್ಯಾರ್ಥಿಗಳ 'ಕದಂಬ ಶಿಷ್ಯವೇತನ' ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

## ಸ್ಪರ್ಧಾತ್ಮಕ ಪರೀಕ್ಷೆಗೆ ಮಾರ್ಗದರ್ಶನ ಅಗತ್ಯ

ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಸೂಕ್ತ ಮಾರ್ಗದರ್ಶನ ಅಗತ್ಯವಿದೆ ಎಂದು ಐ.ಎಫ್.ಎಸ್. ಅಧಿಕಾರಿ ಮಹಾಲಿಂಗ ಮದರಗಾಂವ್ ನುಡಿದರು.

ನಗರದ ರಾಜೀವಗಾಂಧಿ ಕಾಲೇಜಿನಲ್ಲಿ ಶುಕ್ರವಾರ ನಡೆದ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸುವುದು ಹೇಗೆ? ವಿಷಯ ಕುರಿತ ಕಾರ್ಯಾಗಾರದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ವಿದ್ಯಾರ್ಥಿಗಳ 'ಕದಂಬ ಶಿಷ್ಯವೇತನ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಜಿಲ್ಲೆಯಲ್ಲಿ ಸಾಕಷ್ಟು ಜನ ಪ್ರತಿಭಾವಂತರಿದ್ದಾರೆ. ಆದರೆ, ಸ್ಪರ್ಧಾತ್ಮಕ ವಾತರಣ ಕೊರತೆಯೇ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಹಿಂದೆ ಬೀಳಲು ಕಾರಣ ಎಂದು ತಿಳಿಸಿದರು. ಬೀದರ್‌ನಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಾಗಿ ಗ್ರಂಥಾಲಯ ಸ್ಥಾಪಿಸುವ ಅವಶ್ಯಕತೆ ಇದೆ ಎಂದರು. ಸ್ಫೂರ್ತಿ ಸ್ವಯಂ ಸೇವಾ ಸಂಸ್ಥೆಯ ವತಿಯಿಂದ ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ ಸಂಸ್ಥೆಯ ಅಧ್ಯಕ್ಷೆ ಶಕುಂತಲಾ ಮೇತ್ರೆ ಮತ್ತಿತರರು ಉಪಸ್ಥಿತರಿದ್ದರು.